# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿನ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ಲೆಕ್ಕಶೀರ್ಷಿಕೆಯಡಿ ಒದಗಿಸಿರುವ ಅನುದಾನದಲ್ಲಿ 1 ಮತ್ತು 2ನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: MWD 182 MDS 2024, ದಿ:03-04-2024.
2. ಸರ್ಕಾರದ ಆದೇಶ ಸಂಖ್ಯೆ: MWD 182 MDS 2024, ದಿ:05-04-2024 ಮತ್ತು 06-07-2024.
3. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 2 ಟಿಎಫ್‌ಪಿ 2024, ದಿ:01.04.2024.
4. ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 4 ಟಿಎಫ್‌ಪಿ 2024, ದಿ:04.07.2024.
5. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಇ-ಕಛೇರಿ ಕಡತ ಸಂಖ್ಯೆ: DOM/DEVP/BUD/3/2024.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ. ಸಂ. (1)ರಲ್ಲಿನ ಸರ್ಕಾರದ ಆದೇಶದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು ಆಯವ್ಯಯ ಅಂದಾಜಿನನ್ವಯ 2024-25ನೇ ಸಾಲಿಗೆ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರ. ಸಂ. (2)ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆಯ ಅಧೀನ ಇಲಾಖೆಗಳಿಗೆ 2024-25ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಮುಂದುವರೆದ ಯೋಜನೆಗಳಿಗೆ ಏಪ್ರಿಲ್ -2024 ರಿಂದ ಸೆಪ್ಟೆಂಬರ್-2024 ರವರೆಗಿನ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಶೇ.50 ರಷ್ಟು ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಿದೆ. ಆದರೆ, ಅಲ್ಪಸಂಖ್ಯಾತರ ನಿರ್ದೇಶನಾಲಯದ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಒದಗಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯ ಅನುಮೋದನೆಯನ್ನು ಕಡ್ಡಾಯವಾಗಿ ಪಡೆಯುವಂತೆ ಮೇಲೆ ಓದಲಾದ (3) ಮತ್ತು (4) ರ ಆದೇಶಗಳಲ್ಲಿ ತಿಳಿಸಲಾಗಿರುತ್ತದೆ.

| ಕ್ರ.ಸಂ. | ಲೆಕ್ಕಶೀರ್ಷಿಕೆ ಮತ್ತು ವಿವರ | ಆಯವ್ಯಯ ಅಂದಾಜು 2024-25 (ರೂ.ಲಕ್ಷಗಳಲ್ಲಿ) |
|---|---|---|
| 1 | 2225-04-102-0-04<br>ಕ್ರೈಸ್ತ ಸಮುದಾಯದ ಅಭಿವೃದ್ಧಿ<br>059- ಇತರೆ ಖರ್ಚುಗಳು | 8500.00 |
| 2 | 2225-04-102-0-10<br>ಅಲ್ಪಸಂಖ್ಯಾತರಿಗಾಗಿ ವಿವಿಧ ಅಭಿವೃದ್ಧಿ ಕಾರ್ಯಕ್ರಮ<br>059- ಇತರೆ ಖರ್ಚುಗಳು | 13500.00 |
| 3 | 4225-04-102-0-01<br>ನಗರ ಪ್ರದೇಶಗಳಲ್ಲಿನ ಅಲ್ಪಸಂಖ್ಯಾತರ ಸ್ಲಂ/ಕಾಲೋನಿ ಅಭಿವೃದ್ಧಿ ಯೋಜನೆ<br>386-ನಿರ್ಮಾಣ | 40000.00 |
| 4 | 4225-04-102-0-02<br>ಅಲ್ಪಸಂಖ್ಯಾತರಿಗಾಗಿ ಮುಖ್ಯಮಂತ್ರಿ ವಿಶೇಷ ಅಭಿವೃದ್ಧಿ ಯೋಜನೆ<br>132-ಬಂಡವಾಳ ವೆಚ್ಚಗಳು. | 10000.00 |

.......2

Scanned with OKEN Scanner

| | | |
|---|---|---|
| 5 | 4225-04-190-0-03<br>ಅಲ್ಪಸಂಖ್ಯಾತರಿಗಾಗಿ ವಸತಿ ನಿಲಯ ಮತ್ತು ವಸತಿ ಶಾಲೆ ಕಟ್ಟಡಗಳ ನಿರ್ಮಾಣ<br>133- ಮಹತ್ವಾಕಾಂಕ್ಷೆಯ ತಾಲ್ಲೂಕು<br>386-ನಿರ್ಮಾಣ | 7000.00<br>53000.00 |
| 6 | 4225-04-190-0-04<br>ಮೌಲನಾ ಆಜಾದ್ ಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣ<br>386- ನಿರ್ಮಾಣ | 10000.00 |

ಮೇಲ್ಕಂಡ ಲೆಕ್ಕಶೀರ್ಷಿಕೆಗಳಡಿ ನವೆಂಬರ್ 2024ರ ಅಂತ್ಯದವರೆಗೆ ವಿವಿಧ ಕಾರ್ಯಕ್ರಮಗಳಿಗಾಗಿ ವೆಚ್ಚ ಮಾಡಲು ಒಟ್ಟು ರೂ.1251.46 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಕಡತದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ

## ಸರ್ಕಾರದ ಆದೇಶ ಸಂಖ್ಯೆ:MWD 182 MDS 2024, ದಿನಾಂಕ:12-07-2024.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2024-25ನೇ ಸಾಲಿನ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಕೆಳಕಂಡಂತೆ ಲೆಕ್ಕಶೀರ್ಷಿಕೆವಾರು ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ. ಸಂ. | ಲೆಕ್ಕಶೀರ್ಷಿಕೆ ಮತ್ತು ವಿವರ | ಆಯವ್ಯಯ ಅಂದಾಜು 2024-25 (ರೂ.ಲಕ್ಷಗಳಲ್ಲಿ) | ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನಲ್ಲಿ ಬಿಡುಗಡೆಗೆ ಮಾಡಿರುವ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2225-04-102-0-04<br>ಕ್ರೈಸ್ತ ಸಮುದಾಯದ ಅಭಿವೃದ್ಧಿ<br>059- ಇತರೆ ಖರ್ಚುಗಳು | 8500.00 | 4250.00 |
| 2 | 2225-04-102-0-10<br>ಅಲ್ಪಸಂಖ್ಯಾತರಿಗಾಗಿ ವಿವಿಧ ಅಭಿವೃದ್ಧಿ ಕಾರ್ಯಕ್ರಮ<br>059- ಇತರೆ ಖರ್ಚುಗಳು | 13500.00 | 6750.00 |
| 3 | 4225-04-102-0-01<br>ನಗರ ಪ್ರದೇಶಗಳಲ್ಲಿನ ಅಲ್ಪಸಂಖ್ಯಾತರ ಸ್ಲಂ/ಕಾಲೋನಿ ಅಭಿವೃದ್ಧಿ ಯೋಜನೆ<br>386-ನಿರ್ಮಾಣ | 40000.00 | 20000.00 |
| 4 | 4225-04-102-0-02<br>ಅಲ್ಪಸಂಖ್ಯಾತರಿಗಾಗಿ ಮುಖ್ಯಮಂತ್ರಿ ವಿಶೇಷ ಅಭಿವೃದ್ಧಿ ಯೋಜನೆ<br>132-ಬಂಡವಾಳ ವೆಚ್ಚಗಳು. | 10000.00 | 5000.00 |

.......3

